# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** 2021-22ನೇ ಸಾಲಿನ ಪೂರಕ ಅಂದಾಜು-3 ರಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಲೆಕ್ಕಶೀರ್ಷಿಕೆ: 2225-03-190-0-04 ಆಬ್ಜೆಕ್ಟೀವ್ ಕೋಡ್-(106)ರಡಿ ಒದಗಿಸಿರುವ ಅನುದಾನ ರೂ.200.00 ಕೋಟಿಗಳನ್ನು ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:-**

1. 2021-22 ಸಾಲಿನ ಆಯವ್ಯಯ ಸವಿವರ ವೆಚ್ಚದ ಅಂದಾಜುಗಳ ಸಂಪುಟ-5.
2. ಆರ್ಥಿಕ ಇಲಾಖೆ ಇವರ ಪತ್ರ ಸಂಖ್ಯೆ: ಆಇ 01 ಬಿಎಸ್‌ಜಿ 2022, ದಿನಾಂಕ: 29.03.2022.
3. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಪತ್ರ ಸಂಖ್ಯೆ:ದೇಹನಿ/ಲೆ.ವಿ/ಮು.ಯೋ/ಸಿಆರ್-01/2021-22, ದಿನಾಂಕ:30.03.2022.

*******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ 2021-22ನೇ ಸಾಲಿನ ಅಯವ್ಯಯದಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ವಿವಿಧ ಯೋಜನೆಗಳಿಗೆ ರೂ.60.00ಕೋಟಿಗಳನ್ನು ಒದಗಿಸಿದ್ದು, ಸದರಿ ಅನುದಾನವನ್ನು ನಾಲ್ಕು ಕಂತುಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಸಂಪೂರ್ಣವಾಗಿ ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರ ಆರ್ಥಿಕ ಇಲಾಖೆಯ ಪತ್ರದಲ್ಲಿ 2021-22ನೇ ಸಾಲಿನ ಪೂರಕ ಅಂದಾಜುಗಳು(ಮೂರನೇ ಕಂತು) ಅಭಿಯಾಚನೆ ಕ್ರಮಾಂಕ-10 ರಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಲೆಕ್ಕಶಿರ್ಷಿಕೆ: 2225-03-190-0-04 ಸಹಾಯ ಧನ(106) ರಡಿ ರೂ.200.00ಕೋಟಿಗಳನ್ನು ಒದಗಿಸಿರುತ್ತಾರೆ.

ಮೇಲೆ ಓದಲಾದ (3) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು , ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರು 2021-22ನೇ ಸಾಲಿನ ಪೂರಕ ಅಂದಾಜು-3 ರಲ್ಲಿ ಒದಗಿಸಿದಿ ಅನುದಾನ ರೂ.200.00ಕೋಟಿಗಳನ್ನು ಬಿಡುಗಡೆ ಮಾಡಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂಡಿ 05 ಬಿಎಂಎಸ್ 2021

## ಬೆಂಗಳೂರು, ದಿನಾಂಕ: 30-03-2022.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22ನೇ ಸಾಲಿನ ಪೂರಕ ಅಂದಾಜು-3 ರಲ್ಲಿ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಲೆಕ್ಕಶಿರ್ಷಿಕೆ: 2225-03-190-0-04 ಸಹಾಯ ಧನ(106) ರಡಿ ರೂ.200.00ಕೋಟಿಗಳನ್ನು (ರೂ.ಎರಡು ನೂರು ಕೋಟಿಗಳು) ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

30/03/2022

**ಷರತ್ತುಗಳು:**

1. ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತಕ್ಕೆ ಪೂರಕ ಅಂದಾಜು-3 ರಲ್ಲಿ ಒದಗಿಸಿರುವ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ರೂಪಿಸಿ ಮುಂದಿನ ಆಡಳಿತ ಮಂಡಳಿ ಸಭೆಯಲ್ಲಿ ಕ್ರಿಯಾ ಯೋಜನೆಯನ್ನು ಮಂಡಿಸಿ ಆಡಳಿತ ಮಂಡಳಿಯ ನಡವಳಿಯೊಂದಿಗೆ ಕೂಡಲೇ ಸರ್ಕಾರಕ್ಕೆ ಕಳುಹಿಸಿ ಸರ್ಕಾರದ ಅನುಮೋದನೆ ಪಡೆಯತಕ್ಕದ್ದು.
2. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರು ಹಣವನ್ನು ಡ್ರಾ ಮಾಡಲು ಸಲ್ಲಿಸುವ ಸಂಬಂಧಿಸಿದ ಲೆಕ್ಕಶೀರ್ಷಿಕೆವಾರು ಸ್ವೀಕರ್ತನ ರಶೀದಿ ಬಿಲ್ಲುಗಳಿಗೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮೇಲು ರುಜು ಪಡೆದು ಹಣ ಡ್ರಾ ಮಾಡತಕ್ಕದ್ದು.
3. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ ಕಡ್ಡಾಯವಾಗಿ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಹಾಗೂ ನಿಯಮ 2000ರ ನಿಬಂಧನೆಗಳನ್ನು ಪಾಲಿಸತಕ್ಕದ್ದು.
4. ಅನುಮೋದಿಸಿರುವ ಕ್ರಿಯಾ ಯೋಜನೆಗೆ ಒಳಪಟ್ಟು ಅನುದಾನವನ್ನು ಬಿಡುಗಡೆಗೊಳಿಸಿ ಆದೇಶಿಸಲಾಗಿದೆ. ಅನುಮೋದಿತ ಕ್ರಿಯಾ ಯೋಜನೆಯನ್ನು ಕಡ್ಡಾಯವಾಗಿ ಈ ನಿಗಮದ ಜಾಲತಾಣಗಳಲ್ಲಿ ಪ್ರಚುರಪಡಿಸುವುದು.
5. ಸರ್ಕಾರದಿಂದ ಬಿಡುಗಡೆಗೊಳಿಸಿರುವ ಅನುದಾನದ ವಿವರಗಳನ್ನು, ನಿಗಮದ ಆಡಳಿತ ಮಂಡಳಿ ಮುಂದೆ ಮಂಡಿಸಿರುವ ವಿಷಯಸೂಚಿ, ನಡವಳಿ ಹಾಗೂ ಯೋಜನೆಗಳ ಜಿಲ್ಲಾವಾರು, ತಾಲ್ಲೂಕುವಾರು ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಕಡ್ಡಾಯವಾಗಿ ಸಂಬಂಧಪಟ್ಟ ನಿಗಮ ಮಂಡಳಿಯ ಜಾಲತಾಣದಲ್ಲಿ ಪ್ರಚುರಪಡಿಸುವುದು.
6. 2021-22 ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಅನುದಾನದ ಹಣಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ:ಆಇ 01 ಬಿಎಸ್‌ಜಿ 2022, ದಿನಾಂಕ: 29.03.2022ರ ಪತ್ರದನ್ವಯ ಹಾಗೂ ಇಲಾಖಾ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Shaheenparveen 30/03/2022

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.

2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ), ವಿಧಾನ ಸೌಧ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
5. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮಾನ್ಯೇಜ್‌ಮೆಂಟ್ ಕೇಂದ್ರ 2ನೇ ಮಹಡಿ, ಸೌತ್ ಬ್ಲಾಕ್ ಖನಿಜ ಭವನ, ಬೆಂಗಳೂರು.

<u>ಪ್ರತಿ ಮಾಹಿತಿಗಾಗಿ:</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿ 1 & 2 ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.- ಇಲಾಖಾ ಜಾಲತಾಣದಲ್ಲಿ ಪ್ರಚುರಪಡಿಸುವುದು.
4. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.